ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 45 ಎಂವಿವಿ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:27-06-2009.

ಇಂದ:
ಸರ್ಕಾರದ ಕಾರ್ಯದರ್ಶಿ, (ಉನ್ನತ ಶಿಕ್ಷಣ)
ಶಿಕ್ಷಣ ಇಲಾಖೆ,
ಬೆಂಗಳೂರು-560 001.

ಇವರಿಗೆ:
ಕುಲಸಚಿವರು,
ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ,
ಬಿಜಾಪುರ – 586 101.

ಮಾನ್ಯರೇ,

**ವಿಷಯ:** 2009-10ನೇ ಶೈಕ್ಷಣಿಕ ಸಾಲಿಗೆ ಗುಲ್ಬರ್ಗಾದ ನಾಗಾಂಬಿಕಾ ಮಹಿಳಾ ಪದವಿ ಮಹಾವಿದ್ಯಾಲಯದ ಹೊಸ ಕೋರ್ಸುಗಳಿಗೆ ಸಂಯೋಜನೆ.

**ಉಲ್ಲೇಖ:** ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿ.ವಿ., ಇವರ ಪತ್ರ ಸಂಖ್ಯೆ: ಕರಾಮವಿವಿ/ ಶೈಕ್ಷಣಿಕ/ Affln-1/2008-09/10107, ದಿನಾಂಕ:30-03-2009,

*****

1) ಗುಲ್ಬರ್ಗಾದ ನಾಗಾಂಬಿಕಾ ಮಹಿಳಾ ಪದವಿ ಮಹಾವಿದ್ಯಾಲಯವು 2009-10ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಹೊಸ ಬಿ.ಎ.; ಬಿ.ಎಸ್ಸಿ., ಮತ್ತು ಬಿ.ಕಾಂ., ಕೋರ್ಸುಗಳಿಗೆ ಸಂಯೋಜನೆ ಕೋರಿ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ದ 59ನೇ ಪ್ರಕರಣದ (11)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಗುಲ್ಬರ್ಗಾದ ನಾಗಾಂಬಿಕಾ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ 2009-10ನೇ ಶೈಕ್ಷಣಿಕ ಸಾಲಿನಿಂದ ಕೆಳಕಂಡ ಪದವಿ ಕೋರ್ಸುಗಳನ್ನು ಮತ್ತು ಕೆಳಗೆ ನಿಗಧಿಪಡಿಸಿರುವ ವಿಷಯ ಸಮೂಹ ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ 2009-10ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರ. ಸಂ. | ಕೋರ್ಸು | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಬಿ.ಎ., | ಭಾಷೆಗಳು:<br>ಕನ್ನಡ, ಇಂಗ್ಲೀಷ್, ಹಿಂದಿ, ಉರ್ದು<br>ವಿಷಯಗಳು:<br>ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಮಹಿಳಾ ಅಧ್ಯಯನ, ಕನ್ನಡ, ಗ್ರಾಮೀಣ ಅಭಿವೃದ್ಧಿ, ಸಮಾಜಶಾಸ್ತ್ರ, ಇಂಗ್ಲಿಷ್, ಹಿಂದಿ, ಉರ್ದು, ಸಂಗೀತ, ಸಂಖ್ಯಾಶಾಸ್ತ್ರ<br>ಕಾಂಬಿನೇಷನ್:<br>1. ಇತಿಹಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ<br>2. ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ<br>3. ಇತಿಹಾಸ, ಮಹಿಳಾ ಅಧ್ಯಯನ, ಕನ್ನಡ<br>4. ರಾಜ್ಯಶಾಸ್ತ್ರ, ಗ್ರಾಮೀಣ ಅಭಿವೃದ್ಧಿ, ಸಮಾಜಶಾಸ್ತ್ರ<br>5. ರಾಜ್ಯಶಾಸ್ತ್ರ, ಗ್ರಾಮೀಣ ಅಭಿವೃದ್ಧಿ, ಅರ್ಥಶಾಸ್ತ್ರ<br>6. ಇತಿಹಾಸ, ರಾಜ್ಯಶಾಸ್ತ್ರ, ಇಂಗ್ಲೀಷ್<br>7. ಇತಿಹಾಸ, ರಾಜ್ಯಶಾಸ್ತ್ರ, ಉರ್ದು<br>8. ಇತಿಹಾಸ, ಕನ್ನಡ, ಸಂಗೀತ<br>9. ಕನ್ನಡ, ಮಹಿಳಾ ಅಧ್ಯಯನ, ಇತಿಹಾಸ<br>10. ಅರ್ಥಶಾಸ್ತ್ರ, ಸಂಖ್ಯಾಶಾಸ್ತ್ರ, ಸಮಾಜಶಾಸ್ತ್ರ<br>11. ಸಂಖ್ಯಾಶಾಸ್ತ್ರ, ಇತಿಹಾಸನ, ಸಮಾಜಶಾಸ್ತ್ರ | 50 (ಐವತ್ತು) |

| | | | |
|---|---|---|---|
| 2 | ಬಿ.ಎಸ್ಸಿ | ಭಾಷೆಗಳು:<br>ಕನ್ನಡ, ಹಿಂದಿ, ಇಂಗ್ಲೀಷ್, ಉರ್ದು<br>ಐಚ್ಚಿಕ ವಿಷಯಗಳು:<br>1. ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ<br>2. ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಕಂಪ್ಯೂಟರ್ ಸೈನ್ಸ್<br>ಕಾಂಬಿನೇಷನ್:<br>1. ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ<br>2. ರಸಾಯನಶಾಸ್ತ್ರ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ<br>3. ಭೌತಶಾಸ್ತ್ರ, ಗಣಿತ, ಕಂಪ್ಯೂಟರ್ ಸೈನ್ಸ್ | 50<br>(ಐವತ್ತು) |
| 1 | ಬಿ.ಕಾಂ., | ಭಾಷೆಗಳು:<br>ಕನ್ನಡ, ಹಿಂದಿ, ಇಂಗ್ಲೀಷ್, ಉರ್ದು<br>ವಿಷಯಗಳು:<br>ವಿಶ್ವವಿದ್ಯಾಲಯ ನಿಗಧಿಪಡಿಸಿದಂತೆ<br>ಹಾಗೂ ಎಲ್ಲಾ ಕಡ್ಡಾಯ ವಿಷಯಗಳು | 50<br>(ಐವತ್ತು) |

ಷರತ್ತುಗಳು:-

(1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅವುಗಳನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;

(2) ಮೇಲ್ಕಂಡ ಕಾಲೇಜು *ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ* ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

(3) ನಿಗಧಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.

(4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

(5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

(6) ಕಾಲೇಜು/ಆಡಳಿತ ಮಂಡಳಿಯು ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

(7) ದಿನಾಂಕ:13-08-1997ರಂದು ವಿಶಾಖ V/S ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಬೆಯನ್ನು ಉಂಟುಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

(8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದ ಯುತವಾಗಿ ಕಾಣತಕ್ಕದ್ದು;

(9) ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸು ವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

(10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದ್ದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

(11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

(12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

3) ಎಂಟು ದಿನಗಳೊಳಗಾಗಿ ಅಧಿಸೂಚನೆಯನ್ನು ಹೊರಡಿಸತಕ್ಕದ್ದು.

ತಮ್ಮ ನಂಬುಗೆಯ,

27/6.

(ಯು.ಬಿ. ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ ಇವರಿಗೆ:

(1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001.
(2) ಕಾಲೇಜು ಶಿಕ್ಷಣ ಪ್ರಾದೇಶಿಕ ಜಂಟಿ ನಿರ್ದೇಶಕರು, ಗುಲ್ಬರ್ಗ
(3) ಪ್ರಾಂಶುಪಾಲರು, ನಾಗಾಂಬಿಕಾ ಮಹಿಳಾ ಪದವಿ ಮಹಾವಿದ್ಯಾಲಯ, ನಂ. 910-39-4-19, ತೆಲ್ಕರ ಕಾಲೋನಿ, ಕುಸನೂರ ರಸ್ತೆ, ಗುಲ್ಬರ್ಗ.